# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-161/2022-23 ದಿನಾಂಕ : 03/09/2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ : 03-09-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :16-07-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ಮತ್ತು ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಕೀರ್ತಿ.ಹೆಚ್.ಆರ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ. ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಪ್ರಕಟಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತರಿಸಲಾಗಿರುವುದಾಗಿ ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರು ಸಭೆಯಲ್ಲಿ ಸಾರ್ವಜನಿಕರಿಗೆ ತಿಳಿಸಿದರು.
2) ಸಾರ್ವಜನಿಕರು ಮತದಾನ ಚಲಾಯಿಸುವ ಸಂದರ್ಭದಲ್ಲಿ ಮತದಾರರಿಗೆ ಹತ್ತಿರವಾಗುವ ರೀತಿಯಲ್ಲಿ ಮತಗಟ್ಟೆಯನ್ನು ಸ್ಥಾಪಿಸುವಂತೆ ಸಭೆಯಲ್ಲಿ ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.
3) ಸಾರ್ವಜನಿಕರು ಮತದಾರರ ಗುರುತಿನ ಚೀಟಿಗೆ ಆಧಾರ್ ಸಂಖ್ಯೆ ಜೋಡಿಸುವಂತೆ ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರು ಸಾರ್ವಜನಿಕರಿಗೆ ಅರಿವು ಮೂಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.
4) ಮಂಜುನಾಥನಗರ ಸ್ಲಂನಲ್ಲಿ ಬಾಕಿ ಉಳಿದಿರುವ ಮನೆಗಳಿಗೆ ಹಕ್ಕು ಪತ್ರ ನೀಡುವಂತೆ ಸಾರ್ವಜನಿಕರು ಕೋರಿದಾಗ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.
5) ಬೀದಿ ದೀಪಗಳು ಹೊಸಕೆರೆಹಳ್ಳಿ ಬಡಾವಣೆಯಲ್ಲಿ ಸರಿಯಾಗಿ ಕಾರ್ಯ ನಿರ್ವಹಿಸುತ್ತಿರುವುದಿಲ್ಲವೆಂದು ಸಾರ್ವಜನಿಕರು ತಿಳಿಸಿದಾಗ ಅವುಗಳನ್ನು ಕೂಡಲೇ ಸರಿಪಡಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.
6) ಸ್ಮಶಾನವನ್ನು ಬಿ.ಬಿ.ಎಂ.ಪಿ ವ್ಯಾಪ್ತಿಗೆ ಒಳಪಡಿಸುವಂತೆ ಸಾರ್ವಜನಿಕರು ಕೋರಿದಾಗ, ಸಂಬಂಧಪಟ್ಟ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ.
7) ಎನ್.ಸಿ.ಆರ್.ಟಿ ಎದುರು ರಸ್ತೆಯಲ್ಲಿ ಏಕ ಮುಖ ಸಂಚಾರಕ್ಕೆ ಅನುವು ಮಾಡುವಂತೆ ಸಾರ್ವಜನಿಕರು ಕೋರಿದಾಗ ಸಂಬಂಧಪಟ್ಟ ಸಂಚಾರಿ ವಿಭಾಗ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತರುವಂತೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ.
8) ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹೊಸಕೆರೆಹಳ್ಳಿಯಲ್ಲಿ ಪ್ರಾರಂಭಿಸಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.
9) ಮತದಾರರ ಪಟ್ಟಿಯಲ್ಲಿ ಮರಣ ಹೊಂದಿರುವ ವ್ಯಕ್ತಿಗಳನ್ನು ಪಟ್ಟಿಯಿಂದ ಕೈಬಿಡುವಂತೆ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿರುತ್ತಾರೆ
10) ವಾರ್ಡ್ ಪ್ರದೇಶದಲ್ಲಿ ಸೊಳ್ಳೆಗಳು ಹೆಚ್ಚಾಗಿರುವುದರಿಂದ ಔಷಧಿಯನ್ನು ಸಿಂಪಡಿಸುವಂತೆ ಸಭೆಗೆ ಸಾರ್ವಜನಿಕರು ಕೋರಿದರು.

11) ಪಾದಚಾರಿ ಮಾರ್ಗವನ್ನು ತೆರವುಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಮಾನ್ಯ ನೋಡೆಲ್ ಅಧಿಕಾರಿಯವರು ಸಭೆಗೆ ತಿಳಿಸಿರುತ್ತಾರೆ.

12) ನಮ್ಮ ಕ್ಲಿನಿಕ್ ಅನ್ನು ವಾರ್ಡ್‌ನಲ್ಲಿ ತೆರೆಯಲು ಸಾರ್ವಜನಿಕರು ಕೋರಿದಾಗ ಮಾನ್ಯ ಅಧ್ಯಕ್ಷರು ಮಾತನಾಡಿ ತಾತ್ಕಾಲಿಕವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಒಂದು ಕೊಠಡಿಯಲ್ಲಿ ತೆರೆಯುವಂತೆ ಸೂಚಿಸಿದರು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Keerthi. H. R
ವಾರ್ಡ್ ಸಮಿತಿ ಸಂಚಾಲಕರು

S.M.
ವಾರ್ಡ್ 161 ರ ನೋಡಲ್ ಅಧಿಕಾರಿ.